ನೀಡಿರುವುದಿಲ್ಲ. ಆದುದರಿಂದ, ಭೂಸ್ವಾಧೀನ ಅನುದಾನ ನಿಗದಿಪಡಿಸುವಿಕೆ ಹಾಗೂ ಕಟ್ಟಡ ಕಾಮಗಾರಿಗಳ ಪ್ರಶ್ನೆ ಉದ್ಭವಿಸುವುದಿಲ್ಲ.

ಕುಶಲಕರ್ಮಿಗಳ ಮನೆಗಳನ್ನು ನಿರ್ಮಿಸಲು ಸಹಾಯ ಧನ

466 (372) ಶ್ರೀ ಸುಭಾಷ್ ಆರ್.ಗುತ್ತೇದಾರ್ : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 03 ವರ್ಷಗಳಲ್ಲಿ (2007–08, 2008–09, 2009–10) ಗುಲ್ಬರ್ಗಾ ಜಿಲ್ಲೆಯಲ್ಲಿ ವಂಶಪಾರಂಪರ್ಯವಾಗಿ ಬಂದ ಕುಶಲಕರ್ಮಿಗಳು ಮನೆ ಕಟ್ಟಿಕೊಳ್ಳಲು ಸರ್ಕಾರ ನೀಡಿರುವ ಸಹಾಯಧನದ ಮೊತ್ತವೆಷ್ಟು?

ಆ) ಈ ಸಹಾಯಧನವನ್ನು ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು, ತಾಲ್ಲೂಕುವಾರು ಫಲಾನುಭವಿಗಳ ಹೆಸರು ಮತ್ತು ಇತರೆ ವಿವರಗಳನ್ನು ನೀಡುವುದು;

ಇ) ಇವರುಗಳಿಗೆ ನೀಡಿತ್ತಿರುವ ಸಹಾಯಧನದ ಪ್ರಮಾಣವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಈ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು ಮತ್ತು ಯಾವಾಗಿನಿಂದ ಜಾರಿಗೆ ತರಲಾಗುವುದು;

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಣ ಸಚಿವರು) :

ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಕುಶಲಕರ್ಮಿಗಳಿಗೆ ಮನೆ ನಿರ್ಮಿಸಲು ಸಹಾಯಧನ ಒದಗಿಸುವಂತಹ ಯೋಜನೆಗಳನ್ನು ಅನುಷ್ಠಾನ ಗೊಳಿಸುತ್ತಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ವಿದ್ಯಾರ್ಥಿಗಳ ಶುಲ್ಕ ವಿನಾಯಿತಿ

467 (744) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಇಲಾಖೆಯಿಂದ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ನೀಡಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ ಶುಲ್ಕ ವಿನಾಯಿತಿ ನೀಡಲು ಉಪಯೋಗಿಸುವ ಮಾನದಂಡಗಳೇನು; ಯಾವ ಮಾರ್ಗಸೂಚಿಯನ್ನು ಅನುಸರಿಸಲಾಗುತ್ತಿದೆ;

ಇ) ಯಾವ ದಿನಾಂಕದಿಂದ ಆದೇಶ ಹೊರಡಿಸಲಾಗಿದೆ; ಆದೇಶದ ಪ್ರತಿಯನ್ನು ನೀಡುವುದು;

ಈ) ಇದುವರೆಗೆ ಎಷ್ಟು ಜನ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ನೀಡಲಾಗಿದೆ; ಶುಲ್ಕದ ವಿನಾಯಿತಿ ಎಷ್ಟು; ಮಾಹಿತಿ ನೀಡುವುದು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಸರ್ಕಾರದ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಎಲ್ 229 ಬಿಸಿಎ 80, ದಿನಾಂಕ: 16.12.1982ರ ಪ್ರಕಾರ ಶುಲ್ಕ ವಿನಾಯಿತಿ ಸೌಲಭ್ಯವನ್ನು ಯಾವುದೇ ಜಾತಿ ಮತವನ್ನು ಪರಿಗಣಿಸದೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿದ್ದು, ಅರ್ಜಿ ಸಲ್ಲಿಸಿದ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ನೀಡಲಾಗುತ್ತದೆ. ಈ ಸೌಲಭ್ಯದ ಪ್ರಯೋಜನ ಪಡೆಯುವ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ರೂ.11,000/–ದೊಳಗೆ ಇರಬೇಕಾಗುತ್ತದೆ. ಪ್ರವರ್ಗ–1ರ ವಿದ್ಯಾರ್ಥಿಗಳಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ. ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕವನ್ನು ಮರುಪಾವತಿ ಮಾಡಲು ಅವಕಾಶ ಇರುತ್ತದೆ.

ಇ) ಸರ್ಕಾರದ ಆದೇಶ ಸಂ: ಎಸ್‌ಡಬ್ಲ್ಯೂಎಲ್ 229 ಬಿಸಿಎ 80, ದಿನಾಂಕ: 16.12.1982 ರಂದು ಆದೇಶ ಹೊರಡಿಸಲಾಗಿದೆ. (ಆದೇಶದ ಪ್ರತಿಯನ್ನು ಅನುಬಂಧದಲ್ಲಿ ಲಗತ್ತಿಸಲಾಗಿದೆ)

ಈ) 2007–08ನೇ ಸಾಲಿನಲ್ಲಿ 442305 ವಿದ್ಯಾರ್ಥಿಗಳಿಗೆ ರೂ. 3407.13 ಲಕ್ಷಗಳನ್ನು, 2008–09ನೇ ಸಾಲಿನಲ್ಲಿ 473338 ವಿದ್ಯಾರ್ಥಿಗಳಿಗೆ ರೂ.4088.61 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. 2009–10ನೇ ಸಾಲಿನ ಆಯವ್ಯಯದಲ್ಲಿ ರೂ.2000.00 ಲಕ್ಷಗಳನ್ನು ಒದಗಿಸಿದ್ದು, ಮಾರ್ಚ್ 2010ರಲ್ಲಿ ಹೆಚ್ಚುವರಿಯಾಗಿ ರೂ.2500.00 ಲಕ್ಷಗಳನ್ನು ಒದಗಿಸಿದೆ. 2009–10ನೇ ಸಾಲಿನಲ್ಲಿ ದಿನಾಂಕ: 9–3–2010ರ ವರೆಗೆ 232054 ವಿದ್ಯಾರ್ಥಿಗಳಿಗೆ ರೂ.1822.67 ಲಕ್ಷಗಳನ್ನು ಖರ್ಚು ಮಾಡಲಾಗಿದೆ.